# ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.1527/2020

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಎಸ್ . ಲೋಕೇಶಪ್ಪ | CW: 13 | PW: 12 |
| ತಂದೆಯ ಹೆಸರು | : | ಸಣ್ಣಪ್ಪ | | |
| ವಯಸ್ಸು | : | 51 | | |
| ವೃತ್ತಿ | : | ಸಿಹೆಚ್‌ಸಿ–47, ನ್ಯಾಮತಿ ಪೋಲೀಸ್ ಠಾಣೆ | | |
| ವಾಸಸ್ಥಳ | : | ನ್ಯಾಮತಿ | | |

ದಿನಾಂಕಃ 12.06.2026 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ ಮಾನ್ಯ ಸ.ಸ.ಅ.ರವರಿಂದಃ–

ನಾನು ಜೂನ್ 2016 ರಿಂದ 2023 ರವರೆಗೆ ನ್ಯಾಮತಿ ಪೋಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿದ್ದು, ದಿಃ 10.04.2020 ರಂದು ಚಾಸಾ 12 ರವರು ಶಿವಮೊಗ್ಗದ ಸುಬ್ಬಯ್ಯ ಆಸ್ಪತ್ರೆಯಿಂದ ಗಾಯಾಳು ಚಾಸಾ 1 ರವರ ಹೇಳಿಕೆಯನ್ನು ದಾಖಲೆ ಮಾಡಿಕೊಂಡು ನನ್ನ ಮುಂದೆ ಹಾಜರುಪಡಿಸಿದ್ದರ ಮೇರೆಗೆ ಠಾಣಾ ಗುನ್ನೆ ನಂ.42/2020 ರಂತೆ ಪ್ರಕರಣವನ್ನು ದಾಖಲಿಸಿ, ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಪ್ರತಿಯನ್ನು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ದಿಃ 12.04.2020 ರಂದು ಕೃತ್ಯ ಸ್ಥಳಕ್ಕೆ ಭೇಟಿ ನೀಡಿ ಪಂಚರಿಗೆ ನೋಟೀಸ್ ಜಾರಿ ಮಾಡಿ ಅವರು ಒಪ್ಪಿಕೊಂಡಿದ್ದು ಪಂಚರಾದ ಚಾಸಾ 7 ಮತ್ತು 8 ರವರ ಸಮಕ್ಷಮ ಬೆಳಗ್ಗೆ 10.30 ರಿಂದ 11.15 ರ ಸಮಯದಲ್ಲಿ ಚಾಸಾ 1 ರವರು ಸ್ಥಳ ಪಂಚನಾಮೆ ಜರುಗಿಸಿ, ಕಚ್ಚಾ ನಕಾಶೆ ತಯಾರಿಸಿ , ಪೊಟೋವನ್ನು ತೆಗೆಸಿ, ಅದೇ ದಿನ ಚಾಸಾ 2 ರಿಂದ 6 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಪೋಟೋಗಳಿಗೆ ಸಂಬಂಧಿಸಿದಂತೆ ಚಾಸಾ 11 ರವರಿಂದ 65 ಬಿ ಪ್ರಮಾಣ ಪತ್ರವನ್ನು ಪಡೆದುಕೊಂಡಿರುತ್ತೇನೆ.

ದಿಃ 17.04.2020 ರಂದು ಚಾಸಾ 8 ಮತ್ತು 9 ರವರ ಸಮಕ್ಷಮ 1 ನೇ ಆರೋಪಿಯು 1. ½ ಅಡಿ ಕುಡುಗೋಲನ್ನು ಹಾಜರುಪಡಿಸಿದ್ದು ಅದನ್ನು ಸಂಜೆ 4.30 ರಿಂದ 5.30 ರ ಸಮಯದಲ್ಲಿ ಅಮಾನತ್ತು ಪಂಚನಾಮೆಯ ಜರುಗಿಸುವ ಮೂಲಕ ಅಮಾನತ್ತುಪಡಿಸಿಕೊಂಡು ಪೋಟೋವನ್ನು ತೆಗೆಸಿರುತ್ತೇನೆ. ಚಾಸಾ 1 ರವರ ಗಾಯದ ಪ್ರಮಾಣ ಪತ್ರವನ್ನು ಚಾಸಾ 10 ರವರಿಂದ ಪಡೆದುಕೊಂಡಿರುತ್ತೇನೆ. ಅದೇ ದಿನ ಆರೋಪಿಯು ಸ್ವ ಇಚ್ಛೆ ಠಾಣೆಗೆ ಹಾಜರಾದ ಮೇರೆಗೆ ಠಾಣಾ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ತನಿಖೆ ಪೂರ್ಣಗೊಳಿಸಿ ಆರೋಪಿ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

ಸಾಕ್ಷಿಯು ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಮು.ಮಾ 1 ನ್ನು ನೋಡಿ ಗುರುತಿಸಿರುತ್ತಾರೆ.

ಸಾಕ್ಷಿಯು ನಿಪಿ 1 ದೂರು, ನಿಪಿ 2 ಸ್ಥಳ ಪಂಚನಾಮೆ, ನಿಪಿ 3 ಕಚ್ಚಾ ನಕಾಶೆ, ನಿಪಿ 7 ಅಮಾನತ್ತು ಪಂಚನಾಮೆ, ನಿಪಿ 10 ಗಾಯದ ಪ್ರಮಾಣ ಪತ್ರಗಳಲ್ಲಿ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಗಳನ್ನು ನಿಪಿ 1(ಸಿ), 2(ಡಿ), 3(ಡಿ), 7(ಸಿ) ಮತ್ತು 10(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು 4 ಪೋಟೋಗಳನ್ನು ನೋಡಿ ಗುರುತಿಸಿರುತ್ತಾರೆ. ಎಫ್ ಐ ಆರ್ ನ್ನು ನಿಪಿ 11 ಎಂದು, ಸಾಕ್ಷಿಯ ಸಹಿಯನ್ನು ನಿಪಿ 11(ಎ) ಎಂದು ಗುರುತಿಸಲಾಯಿತು. ಅಮಾನತ್ತು ಪಂಚನಾಮೆ ಸಂದರ್ಭ ತೆಗೆದ ಕಚ್ಚಾ ನಕಾಶೆಯನ್ನು ನಿಪಿ 12 ಎಂದು, ಸಾಕ್ಷಿಯ

ಸಹಿಯನ್ನು ನಿಪಿ 12(ಎ) ಎಂದು ಗುರುತಿಸಲಾಯಿತು. 65 ಬಿ ಪ್ರಮಾಣ ಪತ್ರವನ್ನು ನಿಪಿ 13 ಎಂದು, ಸಾಕ್ಷಿಯ ಸಹಿಯನ್ನು ನಿಪಿ 13(ಎ) ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ- ಆರೋಪಿ ಪರ ಶ್ರೀ.ಜಿ ಎಸ್ ಕೆ ವಕೀಲರಿಂದಃ-

ಚಾಸಾ 1 ರವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ದೂರು ಸ್ವೀಕರಿಸಿ, ಸುಳ್ಳು ಎಫ್ಐಆರ್ ದಾಖಲಿಸಿ, ಸುಳ್ಳು ಪಂಚನಾಮೆ ಜರುಗಿಸಿರುತ್ತೇನೆ ಎಂದರೆ ಸರಿಯಲ್ಲ. ಆರೊಪಿಗೂ, ಮುದ್ದೆ ಮಾಲಿಗೂ, ಈ ಪ್ರಕರಣಕ್ಕೂ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.